**<u>ದಿನಾಂಕಃ 24-09-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು .</u>**

**<u>ಮುಂದುವರೆದ ಪಾಟೀ ಸವಾಲುಃ 1,2,7 ಮತ್ತು 8 ನೇ ಪ್ರತಿವಾದಿ ಪರ ಶ್ರೀ.ಎಂ.ಬಿ.ಎಂ ವಕೀಲರಿಂದಃ</u>**

1. ದಾವಾ ಎ ಶೆಡ್ಯೂಲ್ ಐಟಂ 2 ನೇ ಆಸ್ತಿಯನ್ನು ಗೌರಮ್ಮ 2014 ರಲ್ಲಿ ಖರೀದಿಗೆ ಹಿಡಿದರು ಅವರೇ ವಹಿವಾಟು ಮಾಡಿಕೊಂಡು ಬರುತ್ತಿದ್ದು, ಅದು ಅವರ ಸ್ವಯಾರ್ಜಿತ ಆಸ್ತಿಯಾಗಿರುತ್ತದೆ ಎಂದರೆ ಸರಿಯಲ್ಲ. ದಾವಾ ಡಿ ಶೆಡ್ಯೂಲ್ ನ ಐಟಂ ನಂಃ 2 ನೇ ಆಸ್ತಿಯನ್ನು 1 ನೆ ಪ್ರತಿವಾದಿ ತನ್ನ ಸ್ವಂತ ಗಳಿಕೆ ಹಾಗೂ ಬ್ಯಾಂಕ್ ನಿಂದ ಸಾಲ ಪಡೆದು ಖರೀದಿಗೆ ಹಿಡಿದ ಆಸ್ತಿಯಾಗಿರುತ್ತದೆ ಎಂದರೆ ಸರಿಯಲ್ಲ. ಅದು 1 ನೇ ಪ್ರತಿವಾದಿಯವರ ಸ್ವಯಾರ್ಜಿತ ಆಸ್ತಿಯಾಗಿರುತ್ತದೆ ಎಂದರೆ ಸರಿಯಲ್ಲ. ದಾವಾ ಡಿ ಶೆಡ್ಯೂಲ್ ನ ಐಟಂ ನಂಃ 10 ನೇ ಆಸ್ತಿ 8 ನೆ ಪ್ರತಿವಾದಿಯವರ ಸ್ವಯಾರ್ಜಿತ ಆಸ್ತಿಯಾಗಿರುತ್ತದೆ ಎಂದರೆ ಸರಿಯಲ್ಲ. ಈ ಎಲ್ಲಾ ಆಸ್ತಿಗಳು ಅವರವರ ಸ್ವಯಾರ್ಜಿತ ಆಸ್ತಿಗಳಾಗಿದ್ದರೂ ಸಹ ನನ್ನ ತಂದೆಯವರೇ ಖರೀದಿಸಿ ಕೊಟ್ಟಿರುತ್ತಾರೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತಂದೆಯವರೇ ಖರೀದಿಸಿ ಕೊಟ್ಟಿರುತ್ತಾರೆ ಎಂದು ತೋರಿಸಲು ಯಾವುದೇ ದಾಖಲೆ ಹಾಜರು ಪಡಿಸಿಲ್ಲ ಎಂದರೆ ಸಾಕ್ಷಿ ನಾವು ವಿಭಾಗ ಆಗಿಲ್ಲ ಎಂದು ಹೇಳುತ್ತಾರೆ.

2. ಆಸ್ತಿ ಖರೀದಿ ಹಿಡಿಯಲು ನಮ್ಮ ತಂದೆಗೆ ಯಾವುದೇ ಆದಾಯ ಇರಲಿಲ್ಲ ಎಂದರೆ ಸಾಕ್ಷಿಯು ನಮ್ಮ ತಂದೆ ಹಂಚಿನ ವ್ಯಾಪಾರ, ಸಿಮೆಂಟ್ ವ್ಯಾಪಾರ, ಕಲ್ಲಿನ ವ್ಯಾಪಾರ ಮಾಡುತ್ತಿದ್ದರು ಅಲ್ಲದೆ ಹೊಲ ಸಹ ಇತ್ತು ಎಂದು ಹೇಳುತ್ತಾರೆ. ನಮ್ಮ ತಂದೆಯವರು ಹಂಚು , ಸಿಮೆಂಟ್ ಮತ್ತು ಕಲ್ಲಿನ ವ್ಯಾಪಾರ ಮಾಡುತ್ತಿದ್ದರು ಎಂದು ತೋರಿಸಲು ದಾಖಲೆ ಇರುತ್ತದೆ. ಅವುಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಲು ತೊಂದರೆ ಇರುವುದಿಲ್ಲ. ದಾವಾದ ಆಸ್ತಿಗಳೆಲ್ಲಾ ಏಕಾತ್ರ ಘರಾಣೆದ ಆಸ್ತಿಗಳಾಗಿದ್ದು ಸಾಮೂಹಿಕ ಕಬ್ಜೆಯಲ್ಲಿ ಇದ್ದೇವೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಎ ಶೆಡ್ಯೂಲ್ ನ 2 ನೇ ಆಸ್ತಿ , ಶೆಡ್ಯೂಲ್ ಡಿ ನ 2 ಮತ್ತು 10 ನೇ ಆಸ್ತಿಗಳಲ್ಲಿ ನನಗೆ ಯಾವುದೇ ಹಕ್ಕು ಇಲ್ಲ ಎಂದರೆ ಸರಿಯಲ್ಲ. ಸದರಿ ಆಸ್ತಿಗಳು 1, 7 ಮತ್ತು 8 ನೆ ಪ್ರತಿವಾದಿಗಳ ಸ್ವಯಾರ್ಜಿತ ಆಸ್ತಿಗಳಾಗಿದ್ದು, ಅದರಲ್ಲಿ ನನಗೆ ಯಾವುದೇ ಹಕ್ಕು ಇಲ್ಲ ಎಂದು ಗೊತ್ತಿದ್ದರೂ ಸಹ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ</u>** 3, 4 ಮತ್ತು 9 ನೇ ಪ್ರತಿವಾದಿ ಪರ ವಕೀಲರು ಸಮಯವಕಾಶ ಕೋರಿದ್ದರಿಂದ ಮುಂದೂಡಲಾಗಿದೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ. ಹೇ. ಕೇ. ಸರಿ ಇದೆ.

ಸಹಿ/–
1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆಎಂಎಫ್ ಸಿ ರಾಣೇಬೆನ್ನೂರು.